ದಿನಾಂಕ 08-10-2021 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ  ವಾದಿ ಪರ ವಕೀಲರಿಂದಃ

ನಾನು ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಹಾಜರಪಡಿಸಿದ್ದು ಅದರಲ್ಲಿ ಬರೆದ ಎಲ್ಲಾ ಮಾಹಿತಿಗಳು ಸತ್ಯವಾಗಿರುತ್ತವೆ. ಅದನ್ನು ಬರೆಯಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳನ್ನು  ಅರ್ಥೈಸಿಕೊಂಡು ಅದಕ್ಕೆ ನಾನು ಸಹಿ ಹಾಕಿರುತ್ತೇನೆ. ಈ ಕೆಳಕಂಡಂತೆ ದಾಖಲೆಗಳನ್ನು ಹಾಜರಪಡಿಸುತ್ತಿದ್ದೇನೆ.

ದಾವಾ ಆಸ್ತಿಗೆ ಸಂಬಂಧಿಸಿದ ಮೂರು ಕೈ ಬರವಣಿಗೆಯ ಪಹಣಿಗಳನ್ನು ಹಾಜರಪಡಿಸಿದ್ದು ಅವುಗಳನ್ನು ನಿಪಿ 1 ರಿಂದ 3 ಎಂದು, 2020-21 ನೇ ಸಾಲಿನ 3 ಪಹಣಿ ಗಳನ್ನು ನಿಪಿ 4 ರಿಂದ 6 ಎಂದು, ಎಂ.ಆರ್.ನಂ.15784 ರ ಧೃಢೀಕೃತ ಪ್ರತಿಯನ್ನು ನಿಪಿ 7 ಎಂದು, ಎಂ.ಆರ್.ನಂ.22154 ರ ಧೃಢೀಕೃತ ಪ್ರತಿಯನ್ನು ನಿಪಿ 8 ಎಂದು, ನಮ್ಮ ವಕೀಲರ ಮೂಲಕ ಕಳುಹಿಸಲಾದ ನೋಟೀಸಿನ ಕಚೇರಿ ಪ್ರತಿಯನ್ನು ನಿಪಿ 9 ಎಂದು, ಸದರಿ ನೋಟೀಸನ್ನು ನೊಂದಾಯಿತ ಅಂಚೆ ಮೂಲಕ ಕಳುಹಿಸಿದ್ದು ಆ ಬಗ್ಗೆ 5 ಅಂಚೆ ರಸೀದಿ ಮತ್ತು ನೋಟೀಸ್ ಜಾರಿಯಾದ ಬಗ್ಗೆ 5 ಅಂಚೆ ಸ್ವೀಕೃತಿಗಳನ್ನು ಹಾಜರಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 10 ರಿಂದ 19 ಎಂದು, ಸರ್ವೆ ನಕ್ಷೆಯ ಪ್ರತಿಯನ್ನು ಹಾಜರಪಡಿಸಿದ್ದು ಅದನ್ನು ನಿಪಿ 20 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ ಹೇ ಕೆ ಸರಿ ಇದೆ.

ನನ್ನ ಸಮಕ್ಷಮ

ಸಹಿ

ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.